**Akashvani : Bangalore**
**National Bulletin In Kannada**
**22.12.2024 / 7.35 am**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**22.12.2024 / 7.35 am**

**<><*<><>*><>**

<u>ಮುಖ್ಯಾಂಶಗಳು</u>

೧. ತಂತ್ರಜ್ಞಾನ, ಮೂಲಸೌಕರ್ಯ ಮತ್ತು ಸುಸ್ಥಿರತೆಯ ಕ್ಷೇತ್ರಗಳಲ್ಲಿ ದೇಶ ತ್ವರಿತ ಪ್ರಗತಿ- ಪ್ರಧಾನಿ ನರೇಂದ್ರ ಮೋದಿ

೨. ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ನೇತೃತ್ವದಲ್ಲಿ ಜಿಎಸ್‌ಟಿ ಸಮಿತಿಯ ೫೫ ನೇ ಸಭೆ; ಸಾರವರ್ಧಿತ ಅಕ್ಕಿ ಮೇಲಿನ ತೆರಿಗೆ ಶೇಕಡ ೫ ಕ್ಕೆ ಇಳಿಕೆ

೩. ಭಾರತೀಯ ರೈಲ್ವೆಯ ೧೦೧ ಸಿಬ್ಬಂದಿಗೆ ಸಚಿವ ಅಶ್ವಿನಿ ವೈಷ್ಣವ್ ೬೯ನೇ ಅತಿ ವಿಶಿಷ್ಟ ರೈಲ್ ಸೇವಾ ಪ್ರಶಸ್ತಿ ಪ್ರದಾನ

೪. ೧೯ ವರ್ಷದೊಳಗಿನವರ ಮಹಿಳಾ ಟಿ-೨೦ ಏಷ್ಯಾ ಕಪ್ ಕ್ರಿಕೆಟ್ ಟೂರ್ನಿ; ಫೈನಲ್‌ನಲ್ಲಿ ಭಾರತ-ಬಾಂಗ್ಲಾದೇಶ ಮುಖಾಮುಖಿ

**<><*<><>*><>**

ಪ್ರಧಾನಿ ನರೇಂದ್ರ ಮೋದಿ ಅವರು ಕುವೈತ್‌ನಲ್ಲಿಂದು ಅಲ್ಲಿನ ನಾಯಕರೊಂದಿಗೆ ಮಾತುಕತೆ ನಡೆಸಲಿದ್ದಾರೆ. ಪ್ರಧಾನಿ ಅವರಿಗೆ ಬಯಾನ್ ಅರಮನೆಯಲ್ಲಿಂದು ಗೌರವ ರಕ್ಷೆ ನೀಡಲಾಗುವುದು, ನಂತರ ಅವರು ಕುವೈತ್‌ನ ಅಧ್ಯಕ್ಷ ಮತ್ತು ಯುವರಾಜರೊಂದಿಗೆ ಪ್ರತ್ಯೇಕ ಸಭೆಗಳನ್ನು ನಡೆಸಲಿದ್ದು, ಕುವೈತ್ ಪ್ರಧಾನಿಯವರೊಂದಿಗೆ ನಿಯೋಗ ಮಟ್ಟದ ಮಾತುಕತೆ ನಡೆಸಲಿದ್ದಾರೆ. ೪೩ ವರ್ಷಗಳಲ್ಲಿ ಕುವೈತ್‌ಗೆ ಭಾರತೀಯ ಪ್ರಧಾನಿಯೊಬ್ಬರ ಮೊದಲ ಪ್ರವಾಸ ಇದಾಗಿದ್ದು, ಕುವೈತ್‌ನ ಎಮಿರ್ ಶೇಖ್ ಮಿಶಾಲ್ ಅಲ್-ಅಹ್ಮದ್ ಅಲ್-ಜಬೇರ್ ಅಲ್-ಸಬಾಹ್ ಅವರ ಆಹ್ವಾನದ ಮೇರೆಗೆ ಅವರು ಕುವೈತ್‌ಗೆ ಭೇಟಿ ನೀಡಿದ್ದಾರೆ. ನಿನ್ನೆ, ಅವರು ಕುವೈತ್ ನಗರದಲ್ಲಿ ವಿಶೇಷ 'ಹಲಾ ಮೋದಿ' ಕಾರ್ಯಕ್ರಮದಲ್ಲಿ ಭಾರತೀಯ ಸಮುದಾಯದವರ ಬೃಹತ್ ಸಭೆಯನ್ನು ಉದ್ದೇಶಿಸಿ ಮಾತನಾಡಿದರು. ಕುವೈತ್‌ನ ಅಭಿವೃದ್ಧಿ ಮತ್ತು ಭಾರತ-ಕುವೈತ್ ಬಾಂಧವ್ಯ ವೃದ್ಧಿಗೆ ಭಾರತೀಯ ಸಮುದಾಯದ ಶ್ರಮ, ಸಾಧನೆ ಮತ್ತು ಕೊಡುಗೆಯನ್ನು ಅವರು ಶ್ಲಾಘಿಸಿದರು. ಭಾರತ 'ವಿಶ್ವಬಂಧು' ವಿಧಾನವನ್ನು ಅನುಸರಿಸುತ್ತಿದ್ದು, ಮುಂದಿನ ತಿಂಗಳು ನಡೆಯಲಿರುವ ಪ್ರವಾಸಿ ಭಾರತೀಯ ದಿವಸ್ ಮತ್ತು ಮಹಾ ಕುಂಭಮೇಳ ಕಾರ್ಯಕ್ರಮಗಳಲ್ಲಿ ಭಾಗವಹಿಸುವಂತೆ ಪ್ರಧಾನಿ ನರೇಂದ್ರ ಮೋದಿ

ಭಾರತೀಯ ಸಮುದಾಯದವರಿಗೆ ಆಹ್ವಾನ ನೀಡಿದರು. ದೇಶದ ತ್ವರಿತ ಪ್ರಗತಿ, ವಿಶೇಷವಾಗಿ ತಂತ್ರಜ್ಞಾನ, ಮೂಲಸೌಕರ್ಯ ಮತ್ತು ಸುಸ್ಥಿರತೆಯ ಕ್ಷೇತ್ರಗಳಲ್ಲಾಗಿರುವ ಪರಿವರ್ತನೆಯ ಬಗ್ಗೆ ಅವರು ವಿವರಿಸಿದರು. ಭಾರತ ವಿಶ್ವದ ಕೌಶಲ್ಯ ರಾಜಧಾನಿಯಾಗುವ ಸಾಮರ್ಥ್ಯವನ್ನು ಹೊಂದಿದೆ ಮತ್ತು ಇದನ್ನು ಸಾಧಿಸಲು, ಜಾಗತಿಕ ಅಗತ್ಯಗಳನ್ನು ಗಮದಲ್ಲಿಟ್ಟುಕೊಂಡು ತನ್ನ ಕೌಶಲ್ಯ ಅಭಿವೃದ್ಧಿ ಕಾರ್ಯಕ್ರಮಗಳನ್ನು ರೂಪಿಸಿದೆ ಎಂದು ಅವರು ಹೇಳಿದರು. ಕುವೈತ್‌ನ ಮಿನಾ ಅಬ್ದುಲ್ಲಾ ಪ್ರದೇಶದ ಕಾರ್ಮಿಕ ಶಿಬಿರಕ್ಕೆ ಭೇಟಿ ನೀಡಿದ ಪ್ರಧಾನಿ ಮೋದಿ ಅವರು ಭಾರತೀಯ ಕಾರ್ಮಿಕರ ವಿಭಾಗದೊಂದಿಗೆ ಸಂವಾದ ನಡೆಸಿದರು. ಕಾರ್ಮಿಕ ಶಿಬಿರ ಭಾರತದ ವಿವಿಧ ರಾಜ್ಯಗಳಿಂದ ಬಂದ ಸುಮಾರು ೧ ಸಾವಿರದ ೫೦೦ ಭಾರತೀಯ ಪ್ರಜೆಗಳ ಕಾರ್ಯಪಡೆಯನ್ನು ಹೊಂದಿದೆ. ಸಂವಾದದ ಸಮಯದಲ್ಲಿ, ಪ್ರಧಾನಿ ಕಳೆದ ೧೦ ವರ್ಷಗಳಲ್ಲಿ ಭಾರತ ಸರ್ಕಾರವು ಪ್ರಾರಂಭಿಸಿದ ವಿವಿಧ ಕಲ್ಯಾಣ ಯೋಜನೆಗಳ ಕುರಿತು ಚರ್ಚಿಸಿದರು.

ಧ್ವನಿ : ಪಧಾನಿ ನರೇಂದ್ರ ಮೋದಿ

ಈ ಕುರಿತು  ಹೇಳಿಕೆ ಬಿಡುಗಡೆಗೊಳಿಸಿರುವ ಪ್ರಧಾನಮಂತ್ರಿ ಕಾರ್ಯಾಲಯ, ಪ್ರಧಾನಿಯವರ ಕಾರ್ಮಿಕ ಶಿಬಿರದ ಭೇಟಿಯು ವಿದೇಶದಲ್ಲಿರುವ ಭಾರತೀಯ ಕಾರ್ಮಿಕರ ಕಲ್ಯಾಣಕ್ಕೆ ಅವರು ನೀಡುವ ಪ್ರಾಮುಖ್ಯತೆಯನ್ನು ಸಂಕೇತಿಸುತ್ತದೆ. ಕಳೆದ ಕೆಲವು ವರ್ಷಗಳಲ್ಲಿ, ಸರ್ಕಾರ ಇ-ಮೈಗ್ರೇಟ್ ಪೋರ್ಟಲ್, ಮದದ್ ಪೋರ್ಟಲ್ ಮತ್ತು ವಿದೇಶದಲ್ಲಿರುವ ಭಾರತೀಯ ಕಾರ್ಮಿಕರ ಕಲ್ಯಾಣಕ್ಕಾಗಿ ಪ್ರವಾಸಿ ಭಾರತೀಯ ಬಿಮಾ ಯೋಜನೆಗಳಂತಹ ಹಲವಾರು ತಂತ್ರಜ್ಞಾನ ಆಧಾರಿತ ಉಪಕ್ರಮಗಳನ್ನು ಕೈಗೊಂಡಿದೆ ಎಂದು ತಿಳಿಸಿದೆ. ಇದೇ ವೇಳೆ ನಾಲ್ಕು ದಶಕಗಳ ಹಿಂದೆ ಭಾರತೀಯ ವಿದೇಶಾಂಗ ಸೇವೆಯಿಂದ ನಿವೃತ್ತರಾಗಿ ಈಗ ಕುವೈತ್‌ನಲ್ಲಿ ನೆಲೆಸಿರುವ ಮಾಜಿ - ಐಎಫ್‌ಎಸ್ ಅಧಿಕಾರಿ ೧೦೧ ವರ್ಷದ ಮಂಗಲ್ ಸೈನ್ ಹಂಡಾ ಅವರನ್ನು ಪ್ರಧಾನಿ ಭೇಟಿಯಾದರು.

<><*<><>*><>

ರಾಜಸ್ಥಾನದ ಜೈಸಲ್ಮೇರ್‌ನಲ್ಲಿ ನಿನ್ನೆ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ನೇತೃತ್ವದಲ್ಲಿ ನಡೆದ ಜಿಎಸ್‌ಟಿ ಸಮಿತಿಯ ೫೫ ನೇ ಸಭೆಯಲ್ಲಿ ಸರಕು ಮತ್ತು ಸೇವಾ ತೆರಿಗೆ - ಜಿಎಸ್‌ಟಿಗೆ ಸಂಬಂಧಿಸಿದಂತೆ ಹಲವಾರು ನಿರ್ಧಾರಗಳನ್ನು ತೆಗೆದುಕೊಳ್ಳಲಾಗಿದೆ.  ಸಭೆಯ ಬಳಿಕ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಸಚಿವೆ ನಿರ್ಮಲಾ ಸೀತಾರಾಮನ್, ಜಿಎಸ್‌ಟಿ ಕೌನ್ಸಿಲ್ ಸಾರವರ್ಧಿತ ಅಕ್ಕಿ ಮೇಲಿನ ದರವನ್ನು ಶೇಕಡಾ ೫ ಕ್ಕೆ ಇಳಿಸಲು ನಿರ್ಧರಿಸಿದೆ ಮತ್ತು ಪೂರ್ವ-ಪ್ಯಾಕೇಜ್ ಮಾಡಿದ ಮತ್ತು ಲೇಬಲ್ ಮಾಡಿದ ವಸ್ತುಗಳ ವ್ಯಾಖ್ಯಾನಕ್ಕೆ ತಿದ್ದುಪಡಿಯನ್ನು ಶಿಫಾರಸು ಮಾಡಿದೆ ಎಂದರು. ಜಿಎಸ್‌ಟಿ ಕೌನ್ಸಿಲ್ ಅನೇಕ ವಸ್ತುಗಳ ಮೇಲಿನ ತೆರಿಗೆ ದರಗಳನ್ನು ಕಡಿಮೆ

ಮಾಡಲು ಅಥವಾ ವಿನಾಯಿತಿ ನೀಡಲು ನಿರ್ಧರಿಸಿದೆ. ಜಿಎಸ್‌ಟಿಯಿಂದ ವಂಶವಾಹಿ ಚಿಕಿತ್ಸೆಗೆ ವಿನಾಯಿತಿ ನೀಡಲಾಗಿದೆ. ಅಲ್ಲದೆ, ದಂಡ ಶುಲ್ಕಗಳು, ಬ್ಯಾಂಕ್‌ಗಳು ಮತ್ತು ಎನ್‌ಬಿಎಫ್‌ಸಿಗಳ ವಿಳಂಬ ಪಾವತಿ ಶುಲ್ಕಗಳ ಮೇಲೆ ಜಿಎಸ್‌ಟಿ ವಿಧಿಸಲಾಗುವುದಿಲ್ಲ. ರಾಷ್ಟ್ರೀಯ ಕೌಶಲ್ಯ ಅಭಿವೃದ್ಧಿ ಮಂಡಳಿಯ ತರಬೇತಿ ಪಾಲುದಾರರನ್ನು ಜಿಎಸ್‌ಟಿಯಿಂದ ವಿನಾಯಿತಿ ನೀಡಲು ನಿರ್ಧರಿಸಲಾಗಿದೆ, ಆದರೆ ಅಧಿಸೂಚನೆ ಹೊರಡಿಸಿದ ನಂತರ ಈ ನಿರ್ಧಾರ ಜಾರಿಗೆ ಬರಲಿದೆ ಎಂದು ಅವರು ಹೇಳಿದರು.

ಧ್ವನಿ: ನಿರ್ಮಲಾ ಸೀತಾರಾಮನ್

ಏರ್ ಟರ್ಬೈನ್ ಇಂಧನವನ್ನು (ಎಟಿಎಫ್) ಜಿಎಸ್‌ಟಿ ವ್ಯಾಪ್ತಿಗೆ ತರುವುದನ್ನು ರಾಜ್ಯಗಳು ವಿರೋಧಿಸಿವೆ, ಆದ್ದರಿಂದ ಯಾವುದೇ ನಿರ್ಧಾರವನ್ನು ತೆಗೆದುಕೊಂಡಿಲ್ಲ ಎಂದು ಹಣಕಾಸು ಸಚಿವರು ಹೇಳಿದರು. ಆರೋಗ್ಯ ವಿಮೆಯ ಮೇಲಿನ ಜಿಎಸ್‌ಟಿ ದರವನ್ನು ವಿತರಣಾ ವೇದಿಕೆಯ ಮೇಲಿನ ತೆರಿಗೆ ಬಗ್ಗೆಯೂ ಚರ್ಚೆ ನಡೆದಿದ್ದು, ಯಾವುದೇ ನಿರ್ಧಾರ ತೆಗೆದುಕೊಳ್ಳಲಾಗಿಲ್ಲ. ಇ-ಕಾಮರ್ಸ್ ಪ್ಲಾಟ್‌ಫಾರ್ಮ್‌ಗಳ ಮೂಲಕ ಆರ್ಡರ್ ಮಾಡುವ ಆಹಾರದ ವಿತರಣಾ ಶುಲ್ಕದ ಮೇಲಿನ ಸರಕು ಮತ್ತು ಸೇವಾ ತೆರಿಗೆ (ಜಿಎಸ್‌ಟಿ) ಅನ್ನು ಕಡಿಮೆ ಮಾಡುವ ಪ್ರಸ್ತಾಪವನ್ನು ಮುಂದೂಡಲಾಗಿದೆ ಎಂದು ಸಚಿವರು ಹೇಳಿದರು.

<><*<><>*><>

ಭಾರತೀಯ ರೈಲ್ವೆಗೆ ನೀಡಿದ ಅಮೂಲ್ಯ ಕೊಡುಗೆಗಳನ್ನು ಗುರುತಿಸಿ ನವದೆಹಲಿಯಲ್ಲಿ ನಿನ್ನೆ ಕೇಂದ್ರ ರೈಲ್ವೆ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ೬೯ನೇ ಅತಿ ವಿಶಿಷ್ಟ ರೈಲ್ ಸೇವಾ ಪ್ರಶಸ್ತಿಯನ್ನು ೧೦೧ ಸಿಬ್ಬಂದಿ ಹಾಗೂ ಅಧಿಕಾರಿಗಳಿಗೆ ಪ್ರದಾನ ಮಾಡಿದರು. ಬಳಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಸಚಿವರು, ಕಳೆದ ಹತ್ತು ವರ್ಷಗಳಲ್ಲಿ ಭಾರತೀಯ ರೈಲ್ವೆ ಗಮನಾರ್ಹ ಪ್ರಗತಿ ಸಾಧಿಸಿದೆ. ಇನ್ನೂ ಹೆಚ್ಚಿನ ಸುರಕ್ಷತೆ, ನಿರ್ವಹಣೆ, ಗುಣಮಟ್ಟ ಹಾಗೂ ತರಬೇತಿಯಲ್ಲಿ ತಮ್ಮ ಪ್ರಯತ್ನಗಳನ್ನು ಮುಂದುವರೆಸುವಂತೆ ಸಿಬ್ಬಂದಿ ಹಾಗೂ ಅಧಿಕಾರಿಗಳಿಗೆ ಕರೆ ನೀಡಿದರು. ಕಳೆದ ಹತ್ತು ವರ್ಷಗಳಲ್ಲಿ ನಿರ್ಮಾಣದ ಗತಿ ಗಮನಾರ್ಹವಾಗಿ ಏರಿದ್ದು, ಕಳೆದ ವರ್ಷದಲ್ಲೇ ಸುಮಾರು ೫ ಸಾವಿರದ ೩೦೦ ಕಿಲೋಮೀಟರ್ ಉದ್ದದ ಹೊಸ ರೈಲು ಮಾರ್ಗಗಳನ್ನು ನಿರ್ಮಿಸಲಾಗಿದೆ. ಕಾಶ್ಮೀರದಿಂದ ಕನ್ಯಾಕುಮಾರಿಗೆ ಸಂಪರ್ಕ ಕಲ್ಪಿಸುವ ಮಹತ್ವಾಕಾಂಕ್ಷಿ ಯೋಜನೆ ಮುಕ್ತಾಯದ ಹಂತದಲ್ಲಿದೆ ಎಂದು ಅವರು ತಿಳಿಸಿದರು.

<><*<><>*><>

ಮಹಾರಾಷ್ಟ್ರದ ನಾಗಪುರ ರಾಷ್ಟ್ರೀಯ ಹೆದ್ದಾರಿಯಲ್ಲಿ ಜೈವಿಕ ಬಿಟುಮೆನ್ ಬಳಸಿ ನಿರ್ಮಿಸಿದ ರಸ್ತೆ ಮಾರ್ಗವನ್ನು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಉದ್ಘಾಟಿಸಿದರು. ಬಳಿಕ ಅವರು, ದೇಶದ ಅನ್ನದಾತರು ಇಂದು ವಿದ್ಯುತ್ ಮತ್ತು ಇಂಧನದಾತರಾಗುತ್ತಿದ್ದಾರೆ. ಪೆಟ್ರೋಲ್‌ನಲ್ಲಿ ಶೇಕಡ ೧೫ರಿಂದ ೨೦ರಷ್ಟು ಎಥೆನಾಲ್ ಬಳಕೆ ಮಾಡಲಾಗುತ್ತಿದೆ. ಇದನ್ನು ರೈತರು ಉತ್ಪಾದಿಸುತ್ತಿದ್ದು, ಇದೇ ಮಾದರಿಯಲ್ಲಿ ರೈತರು ಬಿಟುಮೆನ್ ದಾತರೂ ಆಗುತ್ತಿದ್ದಾರೆ ಎಂದು ಹೇಳಿದರು. ಜೋಳದಿಂದ ಜೈವಿಕ ಎಥೆನಾಲ್ ಉತ್ಪಾದಿಸಲಾಗುತ್ತಿದೆ. ಪರಿಣಾಮವಾಗಿ ಜೋಳದ ದರದಲ್ಲಿ ಹೆಚ್ಚಳವಾಗಿದ್ದು, ಬೆಳೆ ಪ್ರದೇಶವೂ ವೃದ್ಧಿಯಾಗಿದೆ. ಬಿದಿರು ಸೇರಿದಂತೆ ಭತ್ತದ ಹೊಟ್ಟು ಮತ್ತು ಇತರ ಹಲವು ಬೆಳೆಗಳ ತ್ಯಾಜ್ಯದಿಂದ ಜೈವಿಕ ಸಿಎನ್ ಜಿ ಉತ್ಪಾದಿಸುವ ತಂತ್ರಜ್ಞಾನ ಅಭಿವೃದ್ಧಿ ಪಡಿಸಲಾಗಿದೆ. ಭವಿಷ್ಯದಲ್ಲಿ ಜೈವಿಕ ಸಿಎನ್ ಜಿಯಿಂದ ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ ಅವಲಂಬನೆ ಕಡಿಮೆಯಾಗಲಿದೆ ಎಂದು ಹೇಳಿದರು.

<><*<><>*><>

ಪ್ರಧಾನಿ ನರೇಂದ್ರ ಮೋದಿ ಅವರು, ಇದೇ ೨೯ ರಂದು ಆಕಾಶವಾಣಿಯಲ್ಲಿ ಪ್ರತಿ ತಿಂಗಳು ಪ್ರಸಾರವಾಗುವ ತಮ್ಮ ಜನಪ್ರಿಯ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ದೇಶ ಮತ್ತು ವಿದೇಶಗಳಲ್ಲಿರುವ ಭಾರತೀಯರನ್ನುದ್ದೇಶಿಸಿ ಮಾತನಾಡಲಿದ್ದಾರೆ. ಬೆಳಗ್ಗೆ ೧೧ ಗಂಟೆಗೆ ಈ ಕಾರ್ಯಕ್ರಮ ಪ್ರಸಾರವಾಗಲಿದ್ದು, ಇದು ಮನ್ ಕಿ ಬಾತ್‌ನ ೧೧೭ನೇ ಅವತರಣಿಕೆಯಾಗಿದೆ. ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳಲ್ಲಿ, ಆಕಾಶವಾಣಿ ಸುದ್ದಿ ಜಾಲತಾಣ, ಮೊಬೈಲ್ ಆಪ್ ಹಾಗೂ ಯೂಟ್ಯೂಬ್ ಚಾನಲ್‌ಗಳಲ್ಲೂ ಈ ಕಾರ್ಯಕ್ರಮ ಮೂಡಿಬರಲಿದೆ. ಪ್ರಧಾನಮಂತ್ರಿ ಕಾರ್ಯಾಲಯ ಹಾಗೂ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವಾಲಯದ ಜಾಲತಾಣಗಳಲ್ಲೂ ಈ ಕಾರ್ಯಕ್ರಮ ಬಿತ್ತರಗೊಳ್ಳಲಿದೆ. ಹಿಂದಿ ಭಾಷೆಯ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲೂ ಈ ಕಾರ್ಯಕ್ರಮ ಮೂಡಿಬರಲಿದೆ.

<><*<><>*><>

ಮಲೇಷ್ಯಾದ ಕೌಲಾಲಂಪುರದಲ್ಲಿ ನಡೆಯುತ್ತಿರುವ ೧೯ ವರ್ಷದೊಳಗಿನವರ ಮಹಿಳಾ ಟಿ-೨೦ ಏಷ್ಯಾ ಕಪ್ ಕ್ರಿಕೆಟ್ ಟೂರ್ನಿಯ ಫೈನಲ್ ಪಂದ್ಯದಲ್ಲಿಂದು ಭಾರತ-ಬಾಂಗ್ಲಾದೇಶ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಬಾಂಗ್ಲಾದೇಶ ಫೀಲ್ಡಿಂಗ್ ಆಯ್ದುಕೊಂಡಿದೆ. ಇತ್ತೀಚಿನ ವರದಿಯಂತೆ ಭಾರತ ೭ ಓವರ್‌ಗಳಲ್ಲಿ ೨ ವಿಕೆಟ್ ನಷ್ಟಕ್ಕೆ ೩೪ ರನ್ ಗಳಿಸಿ ಆಡುತ್ತಿದೆ.

<><*<><>*><>

ವೆಸ್ಟರ್ನ್ ಇಂಡಿಯಾ ಸ್ಲಾಮ್ ಸ್ಕ್ವಾಷ್, ಮಹಿಳಾ ಸಿಂಗಲ್ಸ್ ವಿಭಾಗದ ಫೈನಲ್‌ನಲ್ಲಿ ಅಖಿಲ ಭಾರತೀಯ ಮಟ್ಟದ ಪೈಪೋಟಿಗೆ ಸಾಕ್ಷಿಯಾಗಲಿದ್ದು, ಏಷ್ಯನ್ ಗೇಮ್ಸ್ ಎರಡು ಕಂಚಿನ ಪದಕ

ವಿಜೇತೆ ಅನಾಹತ್ ಸಿಂಗ್ ಅವರು ತಮ್ಮ ದೇಶವಾಸಿ, ಆಕಾಂಕ್ಷಾ ಸಾಲುಂಖೆ ಅವರನ್ನು ಮುಂಬೈನಲ್ಲಿ ಇಂದು ಎದುರಿಸಲಿದ್ದಾರೆ. ನಿನ್ನೆ ನಡೆದ ಸೆಮಿಫೈನಲ್ ಪಂದ್ಯಗಳಲ್ಲಿ ಅನಾಹತ್ ಅವರು ಈಜಿಪ್ಟ್ ನ ನೂರ್ ಖಫಾಗಿ ಅವರನ್ನು ೩-೧, ಸೆಟ್ ಗಳಿಂದ ಹಾಗೂ ಆಕಾಂಕ್ಷಾ ಅವರು ಈಜಿಪ್ಟ್‌ನ ಐದನೇ ಶ್ರೇಯಾಂಕದ ಜನಾ ಸ್ವೈಫೈ ಅವರನ್ನು ೩-೨ ಸೆಟ್‌ಗಳಿಂದ ಸೋಲಿಸಿ ಫೈನಲ್ ಗೆ ಲಗ್ಗೆ ಇಟ್ಟರು.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ <>*><>**